# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಲ್.ವಿ.ಜಿಡ್ಡಿ ಮತ್ತು ಡಿ.ಎಂ.ಗಿರಿಗೌಡರ – ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಹಿರೇಬೇವನೂರ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM/3404/2014/PP, ದಿನಾಂಕ:27.03.2017
2) ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ವರದಿ ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಜಿಎಂ–3404/2014/ಪಿಪಿ, ದಿ.16.03.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 16.03.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ರಜಾಕ್ ಸಾಬ್ ಬಡಾ ಸಾಬ್ ಮಕಂದರ್ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿ, ವಿಜಯಪುರ ಜಿಲ್ಲೆ ಇಂಡಿ ತಾಲ್ಲೂಕಿನ ಹಿರೇಬೇವನೂರು ಗ್ರಾಮ ಪಂಚಾಯತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಎದುರುದಾರರು 2011 ರಿಂದ 2014 ನೇ ಸಾಲಿನವರೆಗೆ ನಿಯಮಬಾಹಿರವಾಗಿ ಹಣ ಪಾವತಿ ಮಾಡಿ ಹಣ ದುರುಪಯೋಗಪಡಿಸಿಕೊಂಡಿರುತ್ತಾರೆ. ಹಸಿರು ಹೊನ್ನು ಯೋಜನೆ ಅಡಿಯಲ್ಲಿ ತೆಂಗಿನ ಸಸಿ ನೆಡುವ ಯೋಜನೆಗೆ ಸಂಬಂಧಿಸಿದಂತೆ ಕೆಲಸವನ್ನು ಮಾಡದೇ ಸುಮಾರು 25.00 ಲಕ್ಷ ರೂಪಾಯಿಗಳನ್ನು ದುರುಪಯೋಗಪಡಿಸಿಕೊಂಡಿರುತ್ತಾರೆ. ಗ್ರಾಮ ಶೌಚಾಲಯ ನಿರ್ಮಾಣ ಕಾರ್ಯಕ್ರಮದಲ್ಲಿ 2000 ರಿಂದ 2014 ನೇ ಸಾಲಿನವರೆಗೆ ರೂ.10,000/– ಮೊತ್ತದ ಹಣವನ್ನು ದುರುಪಯೋಗಪಡಿಸಿಕೊಂಡಿರುತ್ತಾರೆ. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಎದುರುದಾರರು 2010 ರಿಂದ 2014 ನೇ ಸಾಲಿನವರೆಗೆ ರೂ.3.00 ಕೋಟಿ ಮೊತ್ತದ ಹಣವನ್ನು ದುರುಪಯೋಗಪಡಿಸಿಕೊಂಡಿರುತ್ತಾರೆ. ಸುವರ್ಣ ಗ್ರಾಮ ಯೋಜನೆ ಅಡಿಯಲ್ಲಿ 2010 ರಿಂದ 2013 ರವರೆಗೆ ಕೈಗೊಳ್ಳಲಾದ ಕಾಮಗಾರಿಗಳು ಕಳಪೆಮಟ್ಟದ ಕಾಮಗಾರಿಗಳಾಗಿರುತ್ತವೆ. 2010 ರಿಂದ 2014 ನೇ ಸಾಲಿನವರೆಗೆ ಬಸವ ವಸತಿ ಯೋಜನೆ ಅಡಿಯಲ್ಲಿ ಆಯ್ಕೆಯಾಗಿದ್ದ ಫಲಾನುಭವಿಗಳು ಮನೆ ಕಟ್ಟಿಕೊಂಡಿದ್ದರೂ ಸಹ ಅವರಿಗೆ ಹಣವನ್ನು ಸಂದಾಯ ಮಾಡಿರುವುದಿಲ್ಲ. ಆದುದರಿಂದ, ಎದುರುದಾರರ ವಿರುದ್ಧ ಕ್ರಮ ಜರುಗಿಸಬೇಕೆಂದು ಕೋರಿರುತ್ತಾರೆ. ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆಗೆ ಆದೇಶಿಸಲಾಗಿರುತ್ತದೆ.

ತನಿಖೆಯನ್ನು ಕೈಗೊಳ್ಳಲಾಗಿ, ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಎಲ್.ವಿ.ಜಿಡ್ಡಿ ಮತ್ತು ಡಿ.ಎಂ.ಗಿರಿಗೌಡರ – ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಹಿರೇಬೇವನೂರ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳು ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966 ರ ನಿಯಮ 3(1)(ii) ಮತ್ತು (iii) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಭಾದ್ಯರಾಗಿರುತ್ತಾರೆಂದು ತಿಳಿದು ಬಂದದ್ದರಿಂದ ಎದುರುದಾರರಾದ ಸದರಿ ನೌಕರರುಗಳ ವಿರುದ್ಧ ಶಿಸ್ತು ನಡವಳಿಕೆ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14(ಎ) ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 279 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 11.04.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಲ್.ವಿ.ಜಿಡ್ಡಿ ಮತ್ತು ಡಿ.ಎಂ.ಗಿರಿಗೌಡರ – ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಹಿರೇಬೇವನೂರ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

**(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**

4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5. ಕಾರ್ಯನಿರ್ವಾಹಕ ಅಧಿಕಾರಿ, ಇಂಡಿ ತಾಲ್ಲೂಕು ಪಂಚಾಯತಿ, ಇಂಡಿ, ವಿಜಯಪುರ ಜಿಲ್ಲೆ.
   (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6. ಶ್ರೀ ಎಲ್.ವಿ.ಜಿಡ್ಡಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಬೇವನೂರ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
7. ಮತ್ತು ಡಿ.ಎಂ.ಗಿರಿಗೌಡರ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಿರೇಬೇವನೂರ ಗ್ರಾಮ ಪಂಚಾಯತಿ, ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ.
8. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.